ದಾಸರು ಬೆಳಗನ್ನು ಪ್ರವೇಶಿಸುವ ಪ್ರತಿ ದಿನವೂ ಎರಡು ದೇವದೂತರುಗಳು ಇಳಿದು ಬರುತ್ತಾರೆ. ಆಗ ಅವರಲ್ಲೊಬ್ಬರು ಹೇಳುವರು: ಓ ಅಲ್ಲಾಹ್! ಖರ್ಚು ಮಾಡುವವರಿಗೆ ಬದಲಿಯನ್ನು ನೀಡು. ಇನ್ನೊಬ್ಬರು ಹೇಳುವರು: ಓ ಅಲ್ಲಾಹ್! (ಖರ್ಚು ಮಾಡದೆ) ತಡೆಹಿಡಿಯುವವರಿಗೆ ಹಾನಿಯನ್ನು ನೀಡು

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ದಾಸರು ಬೆಳಗನ್ನು ಪ್ರವೇಶಿಸುವ ಪ್ರತಿ
ದಿನವೂ ಎರಡು ದೇವದೂತರುಗಳು ಇಳಿದು ಬರುತ್ತಾರೆ. ಆಗ ಅವರಲ್ಲೊಬ್ಬರು ಹೇಳುವರು: ಓ ಅಲ್ಲಾಹ್! ಖರ್ಚು ಮಾಡುವವರಿಗೆ ಬದಲಿಯನ್ನು ನೀಡು. ಇನ್ನೊಬ್ಬರು ಹೇಳುವರು: ಓ ಅಲ್ಲಾಹ್! (ಖರ್ಚು ಮಾಡದೆ) ತಡೆಹಿಡಿಯುವವರಿಗೆ ಹಾನಿಯನ್ನು ನೀಡು." [صحيح] [متفق عليه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ತಿಳಿಸುವುದೇನೆಂದರೆ, ಸೂರ್ಯ ಉದಯಿಸುವ ಪ್ರತಿದಿನವೂ, ಇಬ್ಬರು ದೇವದೂತರುಗಳು ಇಳಿದು ಬಂದು ಘೋಷಿಸುವರು. ಅವರಲ್ಲೊಬ್ಬರು ಹೇಳುವರು: ಓ ಅಲ್ಲಾಹ್! ಸತ್ಕರ್ಮಗಳಿಗೆ, ಕುಟುಂಬಕ್ಕೆ, ಅತಿಥಿಗಳಿಗೆ ಮತ್ತು ಸ್ವಯಂಪ್ರೇರಿತ ಉತ್ತಮ ಕಾರ್ಯಗಳಿಗೆ ಖರ್ಚು ಮಾಡುವವರಿಗೆ ಬದಲಿಯನ್ನು ನೀಡು, ಅವರು ಖರ್ಚು ಮಾಡಿದ್ದಕ್ಕೆ ಪ್ರತಿಯಾಗಿ ಅವರಿಗೆ ಒಳಿತು ಮತ್ತು ಸಮೃದ್ಧಿಯನ್ನು ದಯಪಾಲಿಸು. ಇನ್ನೊಬ್ಬರು ಹೇಳುವರು: ಓ ಅಲ್ಲಾಹ್! (ಖರ್ಚು ಮಾಡದೆ) ತಡೆಹಿಡಿಯುವವರಿಗೆ ಹಾನಿಯನ್ನು ನೀಡು ಮತ್ತು ಹಕ್ಕುದಾರರಿಗೆ ಕೊಡದೆ ಅವರು ತಡೆಹಿಡಿದ ಆ ಸಂಪತ್ತನ್ನು ನಾಶಪಡಿಸು.

http://sunnah.global/hadeeth/kn/show/3379